ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/92/2023–24

ದಿನಾಂಕ 28–01–2026

## ಸುತ್ತೋಲೆ

ವಿಷಯ: ದಿನಾಂಕ.30.01.2026ರಂದು ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಜ್ಞಾಪಕಾರ್ಥವಾಗಿ **"ಹುತಾತ್ಮರ ದಿನಾಚರಣೆ"**ಯನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು, ಇವರ ಪತ್ರದ ಸಂಖ್ಯೆ:ಸಿಆಸುಇ 02 ಪಿಹೆಚ್ಎಲ್ 2026, ದಿನಾಂಕ.27.01.2026.

****

ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಕ್ಷರು, ನಿರ್ದೇಶಕರು, ಪ್ರಾಂಶುಪಾಲರು, ಬಟವಾಡೆ ಅಧಿಕಾರಿಗಳು, ಅಧ್ಯಾಪಕರು, ಅಧ್ಯಾಪಕೇತರರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳಿಗೆ ತಿಳಿಸುವುದೇನೆಂದರೆ, ಮೇಲಿನ ಸರ್ಕಾರದ ಉಲ್ಲೇಖ ಪತ್ರ 01ರಲ್ಲಿ ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರು **ದಿನಾಂಕ.30.01.2026ರಂದು** ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಜ್ಞಾಪಕಾರ್ಥವಾಗಿ ಅಂದು ಪೂರ್ವಾಹ್ನ 11.00 ಗಂಟೆಗೆ **"ಹುತಾತ್ಮರ ದಿನಾಚರಣೆ"** ಸಂಬಂಧ ಎರಡು ನಿಮಿಷಗಳ ಕಾಲ ತಮ್ಮ ಚಲನವಲನಗಳನ್ನು ನಿಲ್ಲಿಸಿ **"ಮೌನ ಆಚರಣೆ"**ಯನ್ನು ನಡೆಸುವಂತೆ ಸೂಚಿಸಿರುತ್ತಾರೆ.

ಆದುದರಿಂದ **ದಿನಾಂಕ.30.01.2026ರಂದು** ಪೂರ್ವಾಹ್ನ 11.00 ಗಂಟೆಗೆ **"ಹುತಾತ್ಮರ ದಿನಾಚರಣೆ"** ಸಂಬಂಧ ಎರಡು ನಿಮಿಷಗಳ ಕಾಲ ತಮ್ಮ ಚಲನವಲನಗಳನ್ನು ನಿಲ್ಲಿಸಿ ತಮ್ಮ ತಮ್ಮ ಕಛೇರಿ/ವಿಭಾಗಗಳಲ್ಲಿ **"ಮೌನ ಆಚರಣೆ"**ಯನ್ನು ನಡೆಸುವಂತೆ ಸೂಚಿಸಲಾಗಿದೆ.

28/1/2026
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈ.ವಿ.ವಿ., ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರಿಗೆ ಸದರಿ ಸುತ್ತೋಲೆಯನ್ನು ಹಾಗೂ ಸರ್ಕಾರದ ಪತ್ರವನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
8. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಸಿಆಸುಇ 02 ಪಿಹೆಚ್‌ಎಲ್ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ. ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:27.01.2026

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
ವಿಧಾನಸೌಧ, ಬೆಂಗಳೂರು.

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್ತು / ಕರ್ನಾಟಕ ವಿಧಾನ ಸಭೆ ವಿಧಾನ ಸೌಧ, ಬೆಂಗಳೂರು.
3. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು.
5. ಗೌರವಾನ್ವಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
7. ಎಲ್ಲಾ ಪ್ರಾದೇಶಿಕ ಆಯುಕ್ತರು.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
10. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
11. ಎಲ್ಲಾ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್.
12. ಎಲ್ಲಾ ವಿಶ್ವವಿದ್ಯಾಲಯಗಳ ರಿಜಿಸ್ಟ್ರಾರ್ ಗಳು.
13. ರಿಜಿಸ್ಟ್ರರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

**ಮಾನ್ಯರೆ,**

**ವಿಷಯ:** ಜನವರಿ 30, 2026ರಂದು ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಜ್ಞಾಪಕಾರ್ಥವಾಗಿ ಹುತಾತ್ಮರ ದಿನಾಚರಣೆಯನ್ನು ಆಚರಿಸುವ ಬಗ್ಗೆ.

**ಉಲ್ಲೇಖ:** ಅಧೀನ ಕಾರ್ಯದರ್ಶಿ, ಕೇಂದ್ರ ಗೃಹ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ: 2/1/2026 public ದಿನಾಂಕ: 22.01.2026

** * **

ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿ ವರ್ಷ ಜನವರಿ 30ರಂದು ಬೆಳಿಗ್ಗೆ 11.00 ಗಂಟೆಗೆ ಮೌನ ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ಸೂಚನೆಗಳನ್ನು ನೀಡಲಾಗುತ್ತಿದ್ದು, ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30, 2026ರಂದು ನಡೆಸುವ ಮೌನ ಆಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಈ ಕೆಳಕಂಡ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ:-

1. ಜನವರಿ 30,2026ರಂದು ಬೆಳಿಗ್ಗೆ 11.00 ಗಂಟೆಗೆ ರಾಜ್ಯದೆಲ್ಲೆಡೆ 2 ನಿಮಿಷಗಳ ಕಾಲ ಚಲನವಲನವನ್ನು ನಿಲ್ಲಿಸಿ ಮೌನ ಆಚರಣೆ ನಡೆಸುವುದು.

2. ಎಲ್ಲಿ ಸೈರನ್‌ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯವಿದೆಯೋ ಅಂತಹ ಕಡೆಗಳಲ್ಲಿ ಎರಡು ನಿಮಿಷಗಳು ಮೌನ ಆಚರಣೆಯ ಕಾಲದ ಪ್ರಾರಂಭವನ್ನು ಸೂಚಿಸಲು ಪೂರ್ವಾಹ್ನ 10.59ರಿಂದ 11.00 ಗಂಟೆಯವರೆಗೆ ಸೈರನ್ / ಬಂದೂಕು ಶಬ್ದ ಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆಯ ನಂತರ ಮುಕ್ತಾಯವನ್ನು ಸೂಚಿಸಲು ಪುನ: 11.02 ರಿಂದ 11.03 ನಿಮಿಷದವರೆಗೆ ಸೈರನ್/ಬಂದೂಕು ಶಬ್ದವನ್ನು ಮಾಡಿಸುವುದು.

3. ಸೈರನ್ ಸಿಗ್ನಲ್ ಕೇಳಿದ ನಂತರ (ವ್ಯವಸ್ಥೆ ಲಭ್ಯವಿದ್ದಲ್ಲಿ), ಎಲ್ಲಾ ವ್ಯಕ್ತಿಗಳು ಎದ್ದುನಿಂತು ಮೌನವನ್ನು ಆಚರಿಸುವುದು.

4. ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ, ಬೆಳಿಗ್ಗೆ 11.00 ಗಂಟೆಗೆ 2 ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಹೊರಡಿಸುವುದು.

ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವುದರಿಂದ, ಈ ಉದ್ದೇಶಕ್ಕಾಗಿ ಈ ಕೆಳಕಾಣಿಸಿದ ಕ್ರಮಗಳನ್ನು ಅನುಸರಿಸಬೇಕೆಂದು / ಕೈಗೊಳ್ಳಬೇಕೆಂದು ಕೋರಲಾಗಿದೆ.

- ಹುತಾತ್ಮರ ದಿನವನ್ನು ಪೂರ್ಣ ಪಾವಿತ್ರತೆ ಮತ್ತು ಯೋಗ್ಯವಾದ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ ಸಂಬಂಧಿಸಿದಂತೆ ಭಾಷಣಗಳನ್ನು, ಅದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣ/ ಚರ್ಚೆಗಳನ್ನು ಏರ್ಪಡಿಸತಕ್ಕದ್ದು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು, ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.
- ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳ / ಡಾಕ್ಯುಮೆಂಟರಿ ಚಿತ್ರ ಪ್ರದರ್ಶನಗಳ ಏರ್ಪಾಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.
- ಸಂಬಂಧಪಟ್ಟ ಅಧಿಕಾರಿಗಳು ಮೇಲೆ ಸೂಚಿಸಿರುವ ನಿರ್ದೇಶನಗಳನ್ನು ತಕ್ಕುದಾದ ರೀತಿಯಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

**ತಮ್ಮ ವಿಶ್ವಾಸಿ**

ಸಂದೀಪ್ ಬಿ.ಕೆ.

**(ಸಂದೀಪ್ ಬಿ.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಆಸುಇ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಕಾರ್ಯಕಾರಿ), ವಿಧಾನಸೌಧ, ಬೆಂಗಳೂರು.